**All India Radio: Bangalore**
**National Bulletin In Kannada**
**13.02.2026 7.35 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**13.02.2026 7.35 pm**

**<>><><*><><<>**

ಮುಖ್ಯಾಂಶಗಳು

**೧. ಸಂಸತ್ತಿನ ಉಭಯ ಸದನಗಳ ಕಲಾಪ ಮಾರ್ಚ್ ೯ ಕ್ಕೆ ಮುಂದೂಡಿಕೆ**

**೨. ದೆಹಲಿಯಲ್ಲಿಂದು ಸೇವಾ ತೀರ್ಥ ಸಂಕೀರ್ಣ ಉದ್ಘಾಟಿಸಿದ ಪ್ರಧಾನಿ ನರೇಂದ್ರ ಮೋದಿ**

**೩. ಬಾಂಗ್ಲಾದೇಶ ಸಂಸತ್ ಚುನಾವಣೆ; ತಾರಿಕ್ ರೆಹಮಾನ್ ನೇತೃತ್ವದ ಬಿಎನ್‌ಪಿ ಜಯಭೇರಿ**

**೪. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್: ಕೆನಡಾ ವಿರುದ್ಧ ಯುಎಇ ತಂಡಕ್ಕೆ ೫ ವಿಕೆಟ್‌ಗಳ ಗೆಲುವು**

**<>><><*><><<>**

ಸಂಸತ್ತಿನ ಉಭಯ ಸದನಗಳ ಕಲಾಪವನ್ನು ಮಾರ್ಚ್ ೯ ಕ್ಕೆ ಮುಂದೂಡಲಾಗಿದೆ. ಬಜೆಟ್ ಅಧಿವೇಶನದ ಮೊದಲ ಹಂತ ಕಳೆದ ತಿಂಗಳು ೨೮ ರಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣದೊಂದಿಗೆ ಪ್ರಾರಂಭವಾಯಿತು. ಜಂಟಿ ಸದನವನ್ನುದ್ದೇಶಿಸಿ ರಾಷ್ಟ್ರಪತಿಗಳು ಭಾಷಣ ಮಾಡಿದರು. ಬಜೆಟ್ ಅಧಿವೇಶನ ಎರಡು ಹಂತಗಳಲ್ಲಿ ನಡೆಸಲಾಗುತ್ತಿದೆ. ಎರಡನೇ ಹಂತವು ಮಾರ್ಚ್ ೯ ರಿಂದ ಏಪ್ರಿಲ್ ೨ರವರೆಗೆ ನಡೆಯಲಿದೆ. ಲೋಕಸಭೆಯಲ್ಲಿಂದು ಮೊದಲ ಮುಂದೂಡಿಕೆಯ ನಂತರ ಮಧ್ಯಾಹ್ನ ೧೨ ಗಂಟೆಗೆ ಸದನ ಸೇರಿದಾಗ ಹಲವು ಸಚಿವರು, ತಮ್ಮ ಸಚಿವಾಲಯಕ್ಕೆ ಸಂಬಂಧಿಸಿದ ದಾಖಲೆಗಳನ್ನು ಸಲ್ಲಿಸಿದರು. ನಂತರ, ಸಭಾಧ್ಯಕ್ಷರು ಸದನವನ್ನು ಮುಂದೂಡಿದರು. ಇದಕ್ಕೂ ಮೊದಲು ಇಂದು ಬೆಳಗ್ಗೆ ೧೧ ಗಂಟೆಗೆ ಸದನ ಸೇರಿದಾಗ, ಪೀಠಾಸೀನಾಧಿಕಾರಿ ಸಂಧ್ಯಾ ರೇ, ಜನವರಿ ೨೧ರಂದು ನಿಧನರಾದ ಮಾಜಿ ಸಂಸದ ಭಗವಾನ್ ದಾಸ್ ರಾಥೋಡ್ ಅವರ ನಿಧನದ ಕುರಿತು ಸಂತಾಪ ಸೂಚಕ ನಿರ್ಣಯ ಮಂಡಿಸಿದರು. ಬಳಿಕ ಅವರು, ಪ್ರಶ್ನೋತ್ತರ ಅವಧಿಯನ್ನು ಕೈಗೆತ್ತಿಕೊಂಡರು. ಕೆಮ್ಮಿನ ಸಿರಪ್ ಸೇವನೆಯಿಂದ ಸಾವಿಗೀಡಾದ ಪ್ರಕರಣಕ್ಕೆ ಸಂಬಂಧಿಸಿದ ಪ್ರಶ್ನೆಗೆ ಕೇಂದ್ರ ಆರೋಗ್ಯ ಸಚಿವ ಜೆ.ಪಿ.ನಡ್ಡಾ ಉತ್ತರಿಸಲು ಪ್ರಯತ್ನಿಸಿದರು. ಆದರೆ, ಪ್ರತಿಪಕ್ಷದ ಸದಸ್ಯರು ಘೋಷಣೆಗಳನ್ನು ಕೂಗಿ ಸದನದ ಬಾವಿಗಳಿದು ಪ್ರತಿಭಟಿಸಿದರು. ಸುಗಮ ಕಲಾಪಕ್ಕೆ ಅವಕಾಶ ನೀಡುವಂತೆ ಅವರು ಮನವಿ ಮಾಡಿದರು. ಆದರೆ, ಪ್ರತಿಪಕ್ಷ ಸದಸ್ಯರ ಗದ್ದಲ ಮುಂದುವರಿಸಿದ ಕಾರಣ, ಕಲಾಪವನ್ನು ೧೨ ಗಂಟೆಗೆ ಮುಂದೂಡಲಾಯಿತು. ಇನ್ನೊಂದೆಡೆ ರಾಜ್ಯಸಭೆಯಲ್ಲಿ, ಶೂನ್ಯ ವೇಳೆ ಮತ್ತು ಪ್ರಶ್ನೋತ್ತರ ಅವಧಿಯಲ್ಲಿ ಕಲಾಪ ಸುಗಮವಾಗಿ ಜರುಗಿತು. ಇಂದು ಬೆಳಗ್ಗೆ ೧೧ ಗಂಟೆಗೆ ಸದನ ಸೇರಿದಾಗ ಸಭಾಪತಿ ಸಿ.ಪಿ.ರಾಧಾಕೃಷ್ಣನ್ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಸಂದೇಶವನ್ನು ಓದಿದರು. ನಂತರ, ಶೂನ್ಯ ವೇಳೆಯಲ್ಲಿ ವಿವಿಧ ರಾಜಕೀಯ ಪಕ್ಷಗಳ ಸದಸ್ಯರು ತುರ್ತು ಮಹತ್ವದ

ವಿಷಯಗಳನ್ನು ಪ್ರಸ್ತಾಪಿಸಿದರು. ಬಳಿಕ, ಪ್ರಶ್ನೋತ್ತರ ಅವಧಿ ಪೂರ್ಣಗೊಂಡ ನಂತರ ಸಭಾಪತಿಗಳು ಮಾರ್ಚ್ ೯ಕ್ಕೆ ಕಲಾಪವನ್ನು ಮುಂದೂಡಿದರು.

**<>><><*><><<>**

ಕಾಂಗ್ರೆಸ್ ಹಿರಿಯ ನಾಯಕ ರಾಹುಲ್ ಗಾಂಧಿ ಅವರು ಪ್ರಜಾಪ್ರಭುತ್ವ ಪ್ರಕ್ರಿಯೆ, ಅದರ ಔಚಿತ್ಯ, ಸಾಂವಿಧಾನಿಕ ಶಿಸ್ತು ಮತ್ತು ಸಂಸತ್ತಿನ ನಿಯಮಗಳನ್ನು ಗೌರವಿಸುತ್ತಿಲ್ಲ ಎಂದು ಬಿಜೆಪಿ ಆರೋಪಿಸಿದೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ವಕ್ತಾರ ರವಿಶಂಕರ್ ಪ್ರಸಾದ್, ರಾಹುಲ್ ಗಾಂಧಿ ಅವರಿಗೆ ದೇಶದ ರಾಜಕೀಯ ಅರ್ಥವಾಗುತ್ತಿಲ್ಲ. ದೇಶದ ಪ್ರತಿಷ್ಠೆಯನ್ನು ಹಾಳು ಮಾಡುತ್ತಿದ್ದಾರೆ. ಅವರ ನಡವಳಿಕೆ, ಪ್ರಜಾಪ್ರಭುತ್ವ ವಿರೋಧಿಯಾಗಿದ್ದು, ಯಾವುದೇ ಹೊಣೆಗಾರಿಕೆಯಿಂದ ಅವರು ನಡೆದುಕೊಳ್ಳುತ್ತಿಲ್ಲ ಎಂದು ಆರೋಪಿಸಿದ್ದಾರೆ.

**<>><><*><><<>**

ದೆಹಲಿಯಲ್ಲಿಂದು ಸೇವಾ ತೀರ್ಥ ಸಂಕೀರ್ಣವನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದರು. ಪ್ರಧಾನಿ ಕಾರ್ಯಾಲಯ ಇನ್ನು ಮುಂದೆ ಈ ಹೊಸ ಕಟ್ಟಡದಲ್ಲಿ ಕಾರ್ಯ ನಿರ್ವಹಿಸಲಿದೆ. ಉದ್ಘಾಟನೆಗೊಂಡ ಮೊದಲ ದಿನವೇ ನೂತನ ಕಚೇರಿಯಲ್ಲಿ ಪ್ರಧಾನಿ ಅವರು, ಲಕ್‌ಪತಿ ದೀದಿ ಯೋಜನೆಯ ಗುರಿಯನ್ನು ಆರು ಕೋಟಿಗೆ ದ್ವಿಗುಣಗೊಳಿಸಲು, ಕೃಷಿ ಮೂಲಸೌಕರ್ಯ ನಿಧಿಗೆ ೨ ಲಕ್ಷ ಕೋಟಿ ರೂಪಾಯಿ ಹಾಗೂ ಸ್ಟಾರ್ಟ್‌ಅಪ್ ಇಂಡಿಯಾ ನಿಧಿ ೨.೦ ಗೆ ಹತ್ತು ಸಾವಿರ ಕೋಟಿ ರೂಪಾಯಿಗಳ ಅನುದಾನ ಹಾಗೂ 'ಪಿಎಂ ರಾಹತ್ ಯೋಜನೆಗೆ ಅನುಮೋದನೆ ನೀಡಿದರು. 'ಪಿಎಂ ರಾಹತ್ ಯೋಜನೆ' ಅಡಿಯಲ್ಲಿ ಅಪಘಾತಕ್ಕೆ ಒಳಗಾದವರಿಗೆ ಒಂದು ಲಕ್ಷ ೫೦ ಸಾವಿರ ರೂಪಾಯಿವರೆಗೆ ನಗದು ರಹಿತ ಚಿಕಿತ್ಸೆ ದೊರೆಯಲಿದೆ.

**<>><><*><><<>**

ಅಭಿವೃದ್ಧಿ ಹೊಂದಿದ ರಾಷ್ಟ್ರ ನಿರ್ಮಾಣಕ್ಕೆ ರಾಜಕೀಯ ಸ್ಥಿರತೆ ಮತ್ತು ಬಲವಾದ ಆರ್ಥಿಕತೆ ಮಾತ್ರವಲ್ಲದೆ, ಆರೋಗ್ಯವಂತರು, ಶಿಕ್ಷಣ ಪಡೆದವರು ಮತ್ತು ಜವಾಬ್ದಾರಿಯುತ ನಾಗರಿಕರೂ ಅಗತ್ಯ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದರು. ನವದೆಹಲಿಯಲ್ಲಿ 'ಸಶಕ್ತ ಭಾರತಕ್ಕಾಗಿ ಕರ್ಮಯೋಗ' ಕುರಿತ ರಾಷ್ಟ್ರವ್ಯಾಪಿ ಅಭಿಯಾನ ಉದ್ದೇಶಿಸಿ ಮಾತನಾಡಿದ ಅವರು, ಜನರ ಸಕ್ರಿಯ ಭಾಗವಹಿಸುವಿಕೆ ಇಲ್ಲದೆ ಯಾವುದೇ ರಾಷ್ಟ್ರ ಗುರಿ ಸಾಧಿಸುವುದು ಕಷ್ಟಕರವಾಗುತ್ತದೆ ಎಂದು ಹೇಳಿದರು. ಸಮತೋಲನ ಮತ್ತು ಸಮಗ್ರ ಅಭಿವೃದ್ಧಿಗಾಗಿ ನೈತಿಕತೆ ಹಾಗೂ ಆಧ್ಯಾತ್ಮಿಕತೆಯೊಂದಿಗೆ ಪ್ರಗತಿ ಸಂಯೋಜಿತವಾಗಬೇಕು. ಆರ್ಥಿಕ ಬೆಳವಣಿಗೆ ಸಮೃದ್ಧಿಯನ್ನು ತರುತ್ತದೆ ಮತ್ತು ತಂತ್ರಜ್ಞಾನ ಪ್ರಗತಿ ನವೀನತೆ, ಕಾರ್ಯಕ್ಷಮತೆ ಹಾಗೂ ಸ್ಪರ್ಧಾತ್ಮಕತೆಯನ್ನು ಉತ್ತೇಜಿಸುತ್ತದೆ. ಇವು ಒಟ್ಟಿಗೆ ಸಮೃದ್ಧ ರಾಷ್ಟ್ರಕ್ಕೆ ಅಡಿಪಾಯ ನಿರ್ಮಿಸುತ್ತವೆ ಎಂದರು. ಮಹಾತ್ಮ ಗಾಂಧಿಯವರ ಜೀವನವು ಕರ್ಮಯೋಗದ ಪ್ರಾಯೋಗಿಕ ಉದಾಹರಣೆಯಾಗಿದೆ. ಗೀತೆಯಲ್ಲಿ ನೀಡಲಾದ ಕರ್ಮಯೋಗದ ಬೋಧನೆಗಳನ್ನು ಅವರು ತಮ್ಮ ಜೀವನದಲ್ಲಿ ಅಳವಡಿಸಿಕೊಂಡಿದ್ದರು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

**<>><><*><><<>**

ಬಾಂಗ್ಲಾದೇಶ ಸಂಸತ್ ಚುನಾವಣೆಯಲ್ಲಿ ಭರ್ಜರಿ ಗೆಲುವು ಸಾಧಿಸಿ, ಮೂರನೇ ಎರಡರಷ್ಟು ಬಹುಮತ ಗಳಿಸಿದ ಬಾಂಗ್ಲಾದೇಶ ರಾಷ್ಟ್ರೀಯವಾದಿ ಪಕ್ಷ- ಬಿಎನ್‌ಪಿ ಸರ್ಕಾರ ರಚಿಸಲಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ಇದುವರೆಗೆ ಫಲಿತಾಂಶ ಘೋಷಿಸಲಾದ ೨೮೪ ಕ್ಷೇತ್ರಗಳ ಪೈಕಿ ೨೦೮ ಕ್ಷೇತ್ರಗಳಲ್ಲಿ ಬಿಎನ್‌ಪಿ ಮತ್ತು ಅದರ ಮಿತ್ರ ಪಕ್ಷಗಳು ಜಯ ಸಾಧಿಸಿವೆ. ಬಿಎನ್‌ಪಿ ಅಧ್ಯಕ್ಷ ತಾರಿಕ್ ರೆಹಮಾನ್ ಮತ್ತು ಪಕ್ಷದ ಪ್ರಧಾನ ಕಾರ್ಯದರ್ಶಿ ಮಿರ್ಜಾ ಫಕ್ರುಲ್ ತಮ್ಮ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದ್ದಾರೆ. ತಾರಿಕ್ ರೆಹಮಾನ್ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದೂರವಾಣಿ ಕರೆ ಮಾಡಿ ಮಾತನಾಡಿ, ಬಾಂಗ್ಲಾದೇಶ ಚುನಾವಣೆಯಲ್ಲಿ ಅದ್ಭುತ ಗೆಲುವಿಗೆ ಅವರನ್ನು ಅಭಿನಂದಿಸಿದ್ದಾರೆ. ನೂತನ ಸರ್ಕಾರಕ್ಕೆ ಬೆಂಬಲ ಸೂಚಿಸಿರುವ ಪ್ರಧಾನಿ, ಭಾರತ-ಬಾಂಗ್ಲಾದೇಶ ನಡುವೆ ಆಳವಾಗಿ ಬೇರೂರಿರುವ ಐತಿಹಾಸಿಕ ಮತ್ತು ಸಾಂಸ್ಕೃತಿಕ ಸಂಬಂಧಗಳು ನಿಕಟ ನೆರೆ-ಹೊರೆಯವರಾಗಿ ಎರಡೂ ರಾಷ್ಟ್ರಗಳ ಜನರ ಶಾಂತಿ, ಪ್ರಗತಿ ಮತ್ತು ಸಮೃದ್ಧಿಗೆ ಭಾರತದ ನಿರಂತರ ಬದ್ಧತೆಯನ್ನು ಪುನರುಚ್ಚರಿಸಿದ್ದಾರೆ.

**<>><><*><><<>**

ಐರೋಪ್ಯ ಒಕ್ಕೂಟ ಮತ್ತು ಅಮೆರಿಕ ಜೊತೆಗಿನ ಇತ್ತೀಚಿನ ಎಲ್ಲಾ ಮುಕ್ತ ವ್ಯಾಪಾರ ಒಪ್ಪಂದಗಳು ಭಾರತದ ರಾಷ್ಟ್ರೀಯ ಹಿತಾಸಕ್ತಿಗಳನ್ನು ಸಂಪೂರ್ಣವಾಗಿ ರಕ್ಷಿಸಿವೆ. ರೈತರ ಕಲ್ಯಾಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ನಡೆದ ಭಾರತೀಯ ಕೃಷಿ ಸಂಶೋಧನಾ ಸಂಸ್ಥೆಯ ೬೪ನೇ ಘಟಿಕೋತ್ಸವ ಉದ್ದೇಶಿಸಿ ಮಾತನಾಡಿದ ಸಚಿವರು, ಅಕ್ಕಿ ಉತ್ಪಾದನೆಯಲ್ಲಿ ಭಾರತ, ಚೀನಾವನ್ನು ಹಿಂದಿಕ್ಕಿ ವಿಶ್ವದ ಅಗ್ರ ಉತ್ಪಾದಕ ರಾಷ್ಟ್ರವಾಗಿದೆ. ವಿವಿಧ ತಳಿಯ ಭಾರತದ ಗೋಧಿ ನಾನಾ ದೇಶಗಳಿಗೆ ರಫ್ತಾಗುತ್ತಿವೆ ಎಂದು ತಿಳಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಪ್ರಬಲ, ಹೆಮ್ಮೆಯ, ಸಮೃದ್ಧ, ಸ್ವಾವಲಂಬಿ ಮತ್ತು ಅಭಿವೃದ್ಧಿ ಹೊಂದಿದ ಭಾರತವನ್ನು ನಿರ್ಮಿಸಲಾಗುತ್ತಿದೆ. ಇದಕ್ಕೆ ವಿದ್ಯಾರ್ಥಿಗಳು ಕೊಡುಗೆ ನೀಡಲು ಸಿದ್ಧರಾಗಿರಬೇಕು ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಸಲಹೆ ನೀಡಿದ್ದಾರೆ.

**<>><><*><><<>**

ಕೊಲೊಂಬೊದ ಆರ್.ಪ್ರೇಮದಾಸ್ ಕ್ರೀಡಾಂಗಣದಲ್ಲಿಂದು ನಡೆದ ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ -೨೦೨೬ ರ 'ಬಿ' ಗುಂಪಿನ ೧೯ನೇ ಪಂದ್ಯದಲ್ಲಿ ಆಸ್ಟ್ರೇಲಿಯಾ ವಿರುದ್ಧ ಜಿಂಬಾಂಬ್ವೆ ೨೩ ರನ್‌ಗಳಿಂದ ಭರ್ಜರಿ ಜಯ ಸಾಧಿಸಿದೆ. ಮೊದಲ ಬ್ಯಾಟಿಂಗ್ ಮಾಡಿದ ಜಿಂಬಾಂಬ್ವೆ, ನಿಗದಿತ ೨೦ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೧೬೯ ರನ್ ಗಳಿಸಿತು. ೧೭೦ ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಆಸ್ಟ್ರೇಲಿಯಾ, ೧೯.೩ ಓವರ್‌ಗಳಲ್ಲಿ ೧೪೬ ರನ್‌ಗಳಿಗೆ ತನ್ನೆಲ್ಲಾ ವಿಕೆಟ್ ಕಳೆದುಕೊಂಡಿತು. ಜಿಂಬಾಂಬ್ವೆ ಪರ ೪ ವಿಕೆಟ್ ಕಬಳಿಸಿದ ಬ್ಲೆಸಿಂಗ್ ಮುಜರಾಬಾನಿ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿಂದು ನಡೆದ 'ಡಿ' ಗುಂಪಿನ ೨೦ನೇ ಪಂದ್ಯದಲ್ಲಿ ಕೆನಡಾ ವಿರುದ್ಧ ಯುಎಇ ೫ ವಿಕೆಟ್‌ಗಳಿಂದ ಜಯ ದಾಖಲಾಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಕೆನಡಾ ನಿಗದಿತ ೨೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೧೫೦ ರನ್

ಗಳಿಸಿತು. ಗೆಲುವಿನ ಗುರಿ ಬೆನ್ನತ್ತಿದ ಯುಎಇ, ೧೯.೪ ಓವರ್‌ಗಳಲ್ಲಿ ೫ ವಿಕೆಟ್ ನಷ್ಟಕ್ಕೆ ೧೫೧ ರನ್ ಗಳಿಸಿ, ಗೆಲುವಿನ ನಗೆ ಬೀರಿತು. ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯುತ್ತಿರುವ 'ಎ' ಗುಂಪಿನ ೨೧ನೇ ಪಂದ್ಯದಲ್ಲಿ ನೆದರ್‌ಲ್ಯಾಂಡ್ಸ್ ಮತ್ತು ಅಮೆರಿಕ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ನೆದರ್‌ಲ್ಯಾಂಡ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<>><><*><><<>**

ನವದೆಹಲಿಯಲ್ಲಿ ನಡೆದ ೨೦೨೬ರ ಏಷ್ಯನ್ ಶೂಟಿಂಗ್ ಚಾಂಪಿಯನ್‌ಶಿಪ್‌ನ ಕೊನೆಯ ದಿನವಾದ ಇಂದು ಏಳು ಪದಕಗಳೊಂದಿಗೆ ಭಾರತ ತನ್ನ ಅಭಿಯಾನ ಪೂರ್ಣಗೊಳಿಸಿತು. ಇದರೊಂದಿಗೆ ಹಿರಿಯರ ರೈಫಲ್ ಮತ್ತು ಪಿಸ್ತೂಲ್ ಸ್ಪರ್ಧೆಗಳಲ್ಲಿ ೧೩ ಚಿನ್ನ, ೧೧ ಬೆಳ್ಳಿ ಮತ್ತು ೯ ಕಂಚಿನ ಪದಕಗಳೊಂದಿಗೆ ಒಟ್ಟು ೩೩ ಪದಕಗಳನ್ನು ಗಳಿಸಿತು. ೨೫ ಮೀಟರ್ ಸೆಂಟರ್ ಫೈರ್ ಪಿಸ್ತೂಲ್‌ನಲ್ಲಿ ಅಮನ್‌ಪ್ರೀತ್ ಸಿಂಗ್ ಚಿನ್ನ ವಿಜೇತರಾದರು. ಗುರುಪ್ರೀತ್ ಸಿಂಗ್ ೫೮೪ ಅಂಕಗಳೊಂದಿಗೆ ಬೆಳ್ಳಿ ಹಾಗೂ ಅಂಕುರ್ ಗೋಯೆಲ್ ೫೬೦ ಅಂಕಗಳೊಂದಿಗೆ ಕಂಚಿನ ಪದಕ ಗೆದ್ದರು. ಮಹಿಳೆಯರ ೫೦ ಮೀಟರ್ ರೈಫಲ್ ಪ್ರೋನ್ ಸ್ಪರ್ಧೆಯಲ್ಲಿ ಭಾರತದ ಸಿಫ್ಟ್ ಕೌರ್ ಸಮ್ರಾ ೬೨೩.೨ ಅಂಕಗಳೊಂದಿಗೆ ಬೆಳ್ಳಿ ಹಾಗೂ ತೇಜಸ್ವಿನಿ ಸಾವಂತ್ ೬೨೧.೦ ಅಂಕಗಳೊಂದಿಗೆ ಕಂಚಿನ ಪದಕ ಗೆದ್ದರು. ಮಹಿಳಾ ತಂಡ ಸ್ಪರ್ಧೆಯಲ್ಲಿ, ಸಿಫ್ಟ್ ಕೌರ್ ಸಮ್ರಾ, ತೇಜಸ್ವಿನಿ ಸಾವಂತ್ ಮತ್ತು ಮಾನಿನಿ ಕೌಶಿಕ್ ಒಟ್ಟು ೧೮೬೨.೯ ಅಂಕಗಳೊಂದಿಗೆ ಚಿನ್ನದ ಪದಕ ವಿಜೇತರಾದರು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೬.೦೫ ಕ್ಕೆ ><><<>**